# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ವೈ.ಬಿ.ಮೆಣಸಗಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ ಹಾಗೂ ಇನ್ನಿತರರ ವಿರುದ್ಧ ಶಿಸ್ತು ಕ್ರಮ – ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸುವ ಬಗ್ಗೆ – ಆದೇಶ.

ಓದಲಾಗಿದೆ:-1. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ : Compt/ Uplok / BGM/ 1480 / 2015 /DRE-4, ದಿನಾಂಕ. 19.09.2018.

2. ಮಾನ್ಯ ಉಪಲೋಕಾಯುಕ್ತರವರ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ: Compt / Uplok / BGM/1480 / 2015 /DRE-4, ದಿನಾಂಕ. 20.08.2018.

*****

**ಪ್ರಸ್ತಾವನೆ:-**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 19.09.2018ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರು ಲೋಕಾಯುಕ್ತ ಕಾಯ್ದೆ ಕಲಂ 12(3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಶ್ರೀ ವೈ.ಬಿ.ಮೆಣಸಗಿ, ಸ.ಕಾ.ಇಂ., ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ ರವರು ರೋಣ ತಾಲ್ಲೂಕಿನ ಅಂಗನವಾಡಿ ಕೇಂದ್ರಗಳಿಗೆ ಶುದ್ಧ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳಲ್ಲಿ ಅವ್ಯವಹಾರವಸಗಿ ಸರ್ಕಾರದ ಹಣ ದುರುಪಯೋಗಪಡಿಸಿ ಕೊಂಡಿರುತ್ತಾರೆಂದು ಶ್ರೀ ಸಂಗಪ್ಪ ಎಂ. ಜೋಗರೆಡ್ಡಿ, ಅಧ್ಯಕ್ಷರು, ಸವದಿ ಗ್ರಾಮದ ಜನಜಾಗೃತಿ ವೇದಿಕೆ, ರೋಣ ತಾಲ್ಲೂಕು, ಗದಗ ಜಿಲ್ಲೆ ಇವರು ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತ ಅಧಿಕಾರಿಯಾದ ಶ್ರೀ ವೈ.ಬಿ.ಮೆಣಸಗಿ, ಸ.ಕಾ.ಇಂ., ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ ಇವರಿಂದ ಆಕ್ಷೇಪಣೆಗಳನ್ನು ಕೇಳಲಾಗಿ, ಸದರಿಯವರು ಯಾವುದೇ ಆಕ್ಷೇಪಣೆ ಸಲ್ಲಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ.

ತದನಂತರ ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯ ತನಿಖಾ ವಿಭಾಗದವರು ತನಿಖೆ ನಡೆಸಿ ಸಲ್ಲಿಸಿರುವ ವರದಿಯಲ್ಲಿ 2013-14ನೇ ಸಾಲಿನಲ್ಲಿ ಗದಗ ಜಿಲ್ಲೆ, ರೋಣ ತಾಲ್ಲೂಕು ವ್ಯಾಪ್ತಿಯಲ್ಲಿ ಒಟ್ಟು 161 ಗ್ರಾಮೀಣ ಅಂಗನವಾಡಿ ಕೇಂದ್ರಗಳಿಗೆ ಶುದ್ಧ ಕುಡಿಯುವ ನೀರು ಸರಬರಾಜು ಯೋಜನೆ ಅನುಷ್ಠಾನಗೊಳಿಸಲು ತಯಾರಿಸಿರುವ ಕ್ರಿಯಾ ಯೋಜನೆಯಲ್ಲಿ ಕೆಲವು ತಪ್ಪು ಮಾಹಿತಿಗಳು ಕಂಡುಬಂದಿವೆಯೆಂದು, ಕೆಲವೊಂದು ಅಂಗನವಾಡಿ ಕೇಂದ್ರಗಳಿಗೆ ಕಾಮಗಾರಿ ಅನುಷ್ಠಾನಗೊಳಿಸದಿದ್ದರೂ ಅನುಷ್ಠಾಗೊಳಿಸಿರುವಂತೆ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ ಬಿಲ್ ಪಾವತಿಸಲಾಗಿದೆಯೆಂದು, ಈ ಬಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯಿಂದಾಗಲೀ, ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಪಿ.ಆರ್.ಇ.ಡಿ. ಕಚೇರಿಯಿಂದಾಗಲೀ ಅಥವಾ ಸಿಡಿಪಿಒ ಕಚೇರಿಯಿಂದಾಗಲೀ ಯಾವುದೇ ಪತ್ರ ವ್ಯವಹಾರ ನಡೆದಿಲ್ಲವೆಂದು, ಕೆಲವು ಅಂಗನವಾಡಿ ಕೇಂದ್ರಗಳಲ್ಲಿ ಕಾಮಗಾರಿ ಅನುಷ್ಠಾನಗೊಂಡಿಲ್ಲವೆಂದು, ಇನ್ನೂ ಕೆಲವು ಅಂಗನವಾಡಿ ಕೇಂದ್ರಗಳಲ್ಲಿ ಕಾಮಗಾರಿಯ ಅಂದಾಜು ಪಟ್ಟಿಯಲ್ಲಿ ನಮೂದಿಸಿದಂತೆ ಸಾಮಗ್ರಿಗಳನ್ನು ನೀಡಿದ್ದು, ಆದರೆ ಅವುಗಳು ಜೋಡಣೆಯಾಗಿಲ್ಲವೆಂದು, ಇನ್ನೂ ಕೆಲವು ಅಂಗನವಾಡಿ ಕೇಂದ್ರಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿದ್ದು, ಆದರೆ ನೀರು ಪೂರೈಕೆಯಾಗಿರುವುದಿಲ್ಲವೆಂದು, ಈ ಕುರಿತು 8 ಜನ ಅಂಗನವಾಡಿ ಕಾರ್ಯಕರ್ತರ ವಿಚಾರಣೆ ನಡೆಸಿ ವಿವರವಾದ ಮಾಹಿತಿ ಪಡೆದು ತನಿಖೆ ಕೈಗೊಂಡ ಸಂದರ್ಭದಲ್ಲಿ ಕಾಮಗಾರಿಗಳ ನಿರ್ವಹಣೆಯಲ್ಲಿ ಕಳಪೆ ಗುಣಮಟ್ಟದ ಸಾಮಗ್ರಿಗಳನ್ನು ಅಳವಡಿಸಿರುವುದು, ಕೆಲವು ಸಾಮಗ್ರಿಗಳು ಒಡೆದು ಹಾಳಾಗಿರುವುದು, ಯಂತ್ರಗಳು ಕಾರ್ಯನಿರ್ವಹಿಸದೇ ಇರುವುದು, ಕಾಮಗಾರಿಗೆ ಪೂರೈಸಿದ ಸಾಮಾಗ್ರಿಗಳನ್ನು ಹಾಗೆಯೇ ಇಟ್ಟುಕೊಂಡಿರುವುದು, 49 ಕಾಮಗಾರಿಗಳು ಅಪೂರ್ಣಗೊಂಡಿರುವುದು, 8 ಕಾಮಗಾರಿಗಳು ಅನುಷ್ಠಾನಗೊಳಿಸದೇ ಹಣ ಡ್ರಾ ಮಾಡಿರುವುದು ಕಂಡು ಬಂದಿದೆಯೆಂದು, ಒಟ್ಟಾರೆ ಪ್ರಶ್ನಿತ ಕಾಮಗಾರಿಗಳಲ್ಲಿ ಒಟ್ಟು ರೂ. 11,16,437.25 ಗಳ ಹಣ ದುರುಪಯೋಗವಾಗಿರುವುದು ಕಂಡಿಬಂದಿದ್ದು, ಇದಕ್ಕೆ ಈ ಕೆಳಕಂಡವರೂ ಸಹ ಕಾರಣಕರ್ತ ರಾಗಿದ್ದಾರೆಂದು ತಿಳಿಸಿರುತ್ತಾರೆ:-

1. ಶ್ರೀ ಬಿ.ಎಸ್.ಮೊಕಾಶಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ
2. ಶ್ರೀ ಮಹದೇವಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ
3. ಶ್ರೀ ಎಂ.ಡಿ.ತೋಗುಣಸಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ
4. ಶ್ರೀ ಬಿ.ಸಿ.ಮಲ್ಲಿಕಾರ್ಜುನ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ
5. ಶ್ರೀ ಕೆ.ಎಲ್.ಕಟ್ಟಿಮನಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ
6. ಶ್ರೀ ಜಗದೀಶ್ ಕುಮಾರ್ ನಾಯ್ಕ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗದಗ
7. ಶ್ರೀ ಟಿ.ಆರ್.ಸುದರ್ಶನ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗದಗ
8. ಶ್ರೀ ಕೆಂಪಹನುಮಯ್ಯ, ಶಿಶುಅಭಿವೃದ್ಧಿ ಅಧಿಕಾರಿ, ರೋಣ
9. ಶ್ರೀ ಬಿ.ಎಸ್. ಮೊಕಾಶಿ, ಶಿಶುಅಭಿವೃದ್ಧಿ ಅಧಿಕಾರಿ, ರೋಣ

ಸದರಿ ತನಿಖಾ ವರದಿಗೆ ಸಂಬಂಧಿಸಿದಂತೆ ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ವೈ.ಬಿ.ಮೆಣಸಗಿ, ಸ.ಕಾ.ಇಂ., ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ ಹಾಗೂ ಮೇಲ್ಕಂಡ 9 ಆಪಾದಿತರು ಸೇರಿದಂತೆ ಒಟ್ಟು 10 ಜನ ಆಪಾದಿತರಿಂದ ಆಕ್ಷೇಪಣೆಗಳನ್ನು ಪಡೆಯಲಾಗಿದ್ದು, ಈ ಪೈಕಿ ಶ್ರೀ ಜಗದೀಶ್ ಕುಮಾರ್ ನಾಯ್ಕ, ಕಾ.ಇಂ., ಇವರು ಸಲ್ಲಿಸಿರುವ ಆಕ್ಷೇಪಣೆಯಲ್ಲಿ ತಾವು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗದಗ ಇಲ್ಲಿ 4 ದಿನಗಳು ಮಾತ್ರ ಕಾರ್ಯನಿರ್ವಹಿಸಿದ್ದು, ದೂರಿನ ಆಪಾದನೆ ತಮಗೆ ಅನ್ವಯಿಸುವುದಿಲ್ಲವೆಂದು ತಿಳಿಸಿರುತ್ತಾರೆಂದು, ಇನ್ನುಳಿದ ಆಪಾದಿತರು ತಮ್ಮ ವಿರುದ್ಧದ ಆರೋಪಗಳನ್ನು ನಿರಾಕರಿಸಿರುತ್ತಾರೆಂದು ವರದಿಯಲ್ಲಿ ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರವರು ತನಿಖಾ ವರದಿ, ಆಪಾದಿತ ಅಧಿಕಾರಿ / ನೌಕರರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ರೋಣ ತಾಲ್ಲೂಕಿನ ಅಂಗನವಾಡಿ ಕೇಂದ್ರಗಳಿಗೆ ಶುದ್ಧ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳಲ್ಲಿ ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರಾದ ಶ್ರೀ ಟಿ.ಆರ್.ಸುದರ್ಶನ, ಕಾ.ಇಂ. ಪಂ.ರಾ.ಇಂ.ವಿಭಾಗ, ಗದಗ ಇವರು ಎಲ್ಲಾ ಬಿಲ್ಲುಗಳನ್ನು ಅನುಮೋದಿಸಿದ್ದು, ಸದರಿ ಎಲ್ಲಾ ಕಾಮಗಾರಿಗಳ ಅಳತೆಯನ್ನು ಶ್ರೀ ಕೆ.ಎಲ್.ಕಟ್ಟಿಮನಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ ಪರಿಶೀಲನೆ ಮಾಡಿದ್ದು, ಈ ಇಬ್ಬರು ಆಪಾದಿತರು ದುರುಪಯೋಗದ ಪೂರ್ಣ ಮೊತ್ತ ರೂ. 11,16,437.25ಕ್ಕೆ ಜವಾಬ್ದಾರರಾಗಿರುತ್ತಾರೆಂದು, ಉಳಿದಂತೆ ಕಾಮಗಾರಿಗಳನ್ನು ವೀಕ್ಷಿಸಿ, ಅಳತೆ ಮಾಡಿದ ಆಪಾದಿತರಾದ ಶ್ರೀ ಬಿ.ಎಸ್.ಮೊಕಾಶಿ, ಕಿರಿಯ ಇಂಜಿನಿಯರ್ ಇವರು ರೂ. 5,88,273.50/- ಗಳಿಗೆ, ಶ್ರೀ ಮಹದೇವಪ್ಪ, ಕಿರಿಯ ಇಂಜಿನಿಯರ್ ಇವರು ರೂ. 1,45,636.50/-ಗಳಿಗೆ, ಶ್ರೀ ಎಂ.ಡಿ. ತೋಗುಣಸಿ, ಕಿರಿಯ ಇಂಜಿನಿಯರ್, ಇವರು ರೂ. 2,00,746.75 ಗಳಿಗೆ, ಶ್ರೀ ಬಿ.ಸಿ. ಮಲ್ಲಿಕಾರ್ಜುನ, ಸಹಾಯಕ ಇಂಜಿನಿಯರ್, ಇವರು ರೂ. 4,71,490/- ಗಳಿಗೆ ಜವಾಬ್ದಾರರಾಗಿರುತ್ತಾರೆಂದು, ಮತ್ತೊಬ್ಬ ಆಪಾದಿತರಾದ ಶ್ರೀ ವೈ.ಬಿ.ಮೆಣಸಗಿ, ಸ.ಕಾ.ಇಂ., ಇವರು ಅಂಗನವಾಡಿ ಕೇಂದ್ರ ಸಂಖ್ಯೆ:6ಕ್ಕೆ ನೀಡಲಾದ ಅನುದಾನದಲ್ಲಿ ರೂ. 3,38,714/- ಗಳನ್ನು ಖರ್ಚು ಹಾಕಿರುವುದು ಬಿಲ್ ಪರಿಶೀಲನೆಯಲ್ಲಿ ಕಂಡು ಬಂದಿದ್ದರೂ, ರೂ. 2.52. ಲಕ್ಷ ಮಾತ್ರ ಖರ್ಚಾಗಿದೆಯೆಂದು ತಪ್ಪು ಮಾಹಿತಿ ನೀಡಿದ್ದಾರೆಂದು, ಸದರಿಯವರು ಕಚೇರಿಯ ದಾಖಲೆಗಳನ್ನು ಸರಿಯಾಗಿ ನಿರ್ವಹಿಸಿ, ಅರ್ಜಿ ವಿಚಾರಣೆಗೆ ಸಂಬಂಧಪಟ್ಟಂತೆ ಎಲ್ಲಾ ದಾಖಲೆಗಳನ್ನು ಒದಗಿಸಿದ್ದರೆ, ಕಾಮಗಾರಿಯಲ್ಲಿ ಇನ್ನೂ ಹಲವು ಲೋಪದೋಷಗಳು ಕಂಡು ಬರುವ ಸಾಧ್ಯತೆ ಇತ್ತೆಂದು, ಕಾರಣ ಸದರಿಯವರು ಕರ್ತವ್ಯ ನಿರ್ಲಕ್ಷ್ಯತನ ಎಸಗಿದ್ದಾರೆಂದು, ತನಿಖಾ ವರದಿಗೆ ಶ್ರೀ ವೈ.ಬಿ.ಮೆಣಸಗಿ, ಸ.ಕಾ.ಇಂ., ಇವರು ನೀಡಿರುವ ಉತ್ತರ ಸಮರ್ಪಕವಾಗಿರುವುದಿಲ್ಲವೆಂದು ಹಾಗೂ ಶ್ರೀ ಬಿ.ಎಸ್. ಮೊಕಾಶಿ, ಶಿಶುಅಭಿವೃದ್ಧಿ ಅಧಿಕಾರಿ, ರೋಣ ಇವರು ತಮ್ಮ ಕಾರ್ಯಾವಧಿಯಲ್ಲಿ ನಡೆದ ದೂರಿಗೆ ಸಂಬಂಧಪಟ್ಟ ಕಾಮಗಾರಿಗಳನ್ನು ಸರಿಯಾಗಿ ನಿರ್ವಹಿಸಲಾಗಿದೆಯೇ ಎಂಬುದನ್ನು ಪರಿಶೀಲನೆ ಮಾಡದೇ ಕರ್ತವ್ಯ ಲೋಪವೆಸಗಿರುವುದು ಸಾಬೀತಾಗಿದೆಯೆಂದು, ಶ್ರೀ ಜಗದೀಶ್ ಕುಮಾರ್ ನಾಯ್ಕ, ಕಾರ್ಯಪಾಲಕ ಇಂಜಿನಿಯರ್ ಇವರು 2013-14ನೇ ಸಾಲಿನಲ್ಲಿ 4 ದಿನಗಳು ಮಾತ್ರ ಕಾರ್ಯನಿರ್ವಹಿದ್ದು, ಸದರಿಯವರ ಕಾರ್ಯಾವಧಿಯಲ್ಲಿ ಹಣ ದುರುಪಯೋವಾಗಿಲ್ಲವೆಂದು ಮತ್ತು ಸದರಿಯವರು ಕರ್ತವ್ಯ ಲೋಪ ಎಸಗಿರುವುದು ಸಾಬೀತಾಗಿರುವುದಿಲ್ಲವಾದ್ದರಿಂದ ಅವರ ವಿರುದ್ಧದ ನಡವಳಿಗಳನ್ನು ಕೈಬಿಡಲಾಗಿದೆಯೆಂದು, ಇನ್ನುಳಿದ 9 ಜನ ಆಪಾತರುಗಳು ಸಲ್ಲಿಸಿರುವ ಲಿಖಿತ ವಿವರಣೆಯಲ್ಲಿ ಅವರುಗಳ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಕಾರಣ ಕಂಡುಬರುವುದಿಲ್ಲವೆಂದು, ಹಾಗಾಗಿ ಸದರಿ ಆಪಾದಿತರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ

ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ ಹಾಗೂ ದಾಖಲೆಗಳನ್ನು ಪರಿಶೀಲಿಸಿರುತ್ತದೆ. 2013-14ನೇ ಸಾಲಿನಲ್ಲಿ ಗದಗ ಜಿಲ್ಲೆ, ರೋಣ ತಾಲ್ಲೂಕು ವ್ಯಾಪ್ತಿಯಲ್ಲಿ ಕೈಗೊಳ್ಳಲಾದ ಗ್ರಾಮೀಣ ಅಂಗನವಾಡಿ ಕೇಂದ್ರಗಳಿಗೆ ಶುದ್ಧ ಕುಡಿಯುವ ನೀರು ಸರಬರಾಜು ಯೋಜನೆ ಕಾಮಗಾರಿಗಳನ್ನು ಕಳಪೆ ಗುಣಮಟ್ಟದ್ದಾಗಿ ನಿರ್ವಹಿಸಿರುವುದು, ಕಾಮಗಾರಿ ಅನುಷ್ಠಾನಗೊಳಿಸದೇ ಅನುಷ್ಠಾನಗೊಳಿಸಿರುವಂತೆ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿರುವುದು ಹಾಗೂ ಇನ್ನಿತರ ಅವ್ಯವಹಾರಗಳನ್ನು ಎಸಗಿದ್ದು, ಒಟ್ಟು ರೂ. 11,16,437.25ಗಳು ಹಣ ದುರುಪಯೋಗವಾಗಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರುಗಳು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1) ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಅವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವಿರುತ್ತದೆ.

ಪ್ರಕರಣದಲ್ಲಿ ಭಾಗಿಯಾಗಿರುವ ಈ ಕೆಳಕಂಡ ಇಬ್ಬರು ಆಪಾದಿತರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಸೇರಿದವರಾಗಿದ್ದು, ಸದರಿಯವರುಗಳ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳಲು ಪ್ರಸ್ತಾವನೆಯನ್ನು ಸದರಿ ಇಲಾಖೆಗೆ ಕಳುಹಿಸಲಾಗಿದೆ:-

1. ಶ್ರೀ ಕೆಂಪಹನುಮಯ್ಯ, ಶಿಶುಅಭಿವೃದ್ಧಿ ಅಧಿಕಾರಿ, ರೋಣ
2. ಶ್ರೀ ಬಿ.ಎಸ್. ಮೊಕಾಶಿ, ಶಿಶುಅಭಿವೃದ್ಧಿ ಅಧಿಕಾರಿ, ರೋಣ

ಇನ್ನುಳಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕೆಲಸ ನಿರ್ವಹಿಸಿದ 7 ಜನ ಆಪಾದಿತರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ವಿವರವಾದ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ : ಗ್ರಾಅಪ 93 ಇಎನ್‌ಕ್ಯೂ 2018 ಬೆಂಗಳೂರು, ದಿನಾಂಕ.16.11.2018</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಕೆಳಕಂಡ ನೌಕರರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸಲು

ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ :-

1. ಶ್ರೀ ವೈ.ಬಿ.ಮೆಣಸಗಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ
2. ಶ್ರೀ ಮಹದೇವಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ
3. ಶ್ರೀ ಎಂ.ಡಿ.ತೋಗುಣಸಿ, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ
4. ಶ್ರೀ ಬಿ.ಸಿ.ಮಲ್ಲಿಕಾರ್ಜುನ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ
5. ಶ್ರೀ ಕೆ.ಎಲ್.ಕಟ್ಟಿಮನಿ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ
6. ಶ್ರೀ ಟಿ.ಆರ್.ಸುದರ್ಶನ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗದಗ.

ಪ್ರಕರಣದಲ್ಲಿ ಭಾಗಿಯಾಗಿರುವ ಮತ್ತೊಬ್ಬ ಆಪಾದಿತರಾದ ಶ್ರೀ ಬಿ.ಎಸ್.ಮೊಕಾಶಿ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರೋಣ ಇವರು ಸೇವೆಯಿಂದ ನಿವೃತ್ತಿ ಹೊಂದಿರುವುದರಿಂಧ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 (2)(ಬಿ)(ii) ರಡಿ ಮಂಜೂರಾತಿ ನೀಡಿ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

16/11/2018
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು – ಮುಖ ಪತ್ರದೊಂದಿಗೆ
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗದಗ.

5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
8. ನಿರ್ದೇಶಕರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸಂಬಂಧಪಟ್ಟ ಆಪಾದಿತ ಅಧಿಕಾರಿ / ನೌಕರರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗದಗ ಇವರ ಮುಖಾಂತರ.
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
12. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ (ಸೇವೆಗಳು–ಎ & ಸಿ)
13. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.